ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/08/ಎಲ್ಆರ್‌ಡಿಸಿ/2019-20 /4720

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 14-01-2020

**-:ಸುತ್ತೋಲೆ:-**

ವಿಷಯ: 2019-20 ನೇ ಸಾಲಿನ "43ನೇ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟ" ದಲ್ಲಿ ಪಾಲ್ಗೊಳ್ಳಲು ನೋಂದಣಿ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:1. ದಿನಾಂಕ:09-12-2019 ರಂದು ನಿರ್ದೇಶಕರ ಕೊಠಡಿಯಲ್ಲಿ ನಡೆದ ಕೇಂದ್ರ ಕ್ರೀಡಾ ಸಮಿತಿಯ ಸಭೆಯ ನಡವಳಿಗಳು.
2. ಸುತ್ತೋಲೆ ಸಂಖ್ಯೆ: ಡಿಟಿಇ/08/ಎಲ್ಆರ್‌ಡಿಸಿ/2019-20 ದಿನಾಂಕ: 26.01.2020

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(2) ರಲ್ಲಿ, 2019-20 ನೇ ಸಾಲಿನ "43 ನೇ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟ" ವನ್ನು ದಿನಾಂಕ: 01-02-2020 ರಿಂದ 03-02-2020 ರವರೆಗೆ ಸರ್ಕಾರಿ ಪಾಲಿಟೆಕ್ನಿಕ್, ಬಾಗಲಕೋಟೆ, ಇಲ್ಲಿ ನಿರ್ದೇಶನಾಲಯದ ಸಹಯೋಗದಲ್ಲಿ ಆಯೋಜಿಸಲಾಗುತ್ತಿದ್ದು, ಕ್ರೀಡಾಕೂಟದಲ್ಲಿ ಭಾಗವಹಿಸುವವರು ತಮ್ಮ ತಮ್ಮ ಸಂಸ್ಥೆಗಳಿಂದ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳನ್ನು ಆಯ್ಕೆಮಾಡಿ, ಬಿಟಿಇ ಲಿಂಕ್ ನಲ್ಲಿ ದಿನಾಂಕ: 14.01.2020 ರ ಸಂಜೆ 4.00 ಗಂಟೆ ಯೊಳಗಾಗಿ ನೊಂದಣಿ ಮಾಡಿಕೊಳ್ಳಲು ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿತ್ತು. ನೊಂದಣಿ ದಿನಾಂಕವನ್ನು ವಿಸ್ತರಿಸಲಾಗಿದ್ದು, ಇಲ್ಲಿಯವರೆಗೂ ನೊಂದಣಿ ಮಾಡದಿರುವ ಸಂಸ್ಥೆಯವರು ಬಿಟಿಇ ಲಿಂಕ್ ನಲ್ಲಿ **ದಿನಾಂಕ: 18.01.2020 ರ ಸಂಜೆ 4.00** ಗಂಟೆ ಯೊಳಗಾಗಿ ನೊಂದಣಿ ಮಾಡಿಕೊಳ್ಳಲು ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಮತ್ತೊಮ್ಮೆ ಸೂಚಿಸಲಾಗಿದೆ. ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ ಸಂಸ್ಥೆಯವರು ಖಡ್ಡಾಯವಾಗಿ ಕ್ರೀಡಾಕೂಟದಲ್ಲಿ ಭಾಗವಹಿಸಲು ಸಹ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಪಿಡಿಸಿ)

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬಾಗಲಕೋಟೆ, ಇವರ ಮಾಹಿತಿಗಾಗಿ.
3. ಇ-ಗೌರ್ವನೆನ್ಸ್ ವಿಭಾಗಕ್ಕೆ ಸೂಕ್ತ ಕ್ರಮಕ್ಕಾಗಿ.